Akashvani : Bangalore
Regional Bulletin In Kannada
05.05.2025 / 19.35 pm
ಆಕಾಶವಾಣಿ ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

ಮುಖ್ಯಾಂಶಗಳು

- ಚೆನಾಬ್ ನದಿಯ ಬಾಗ್ಲಿಹಾರ್ ಅಣೆಕಟ್ಟೆಯ ಮೂಲಕ ಪಾಕಿಸ್ತಾನಕ್ಕೆ ನೀರಿನ ಹರಿವು ಸ್ಥಗಿತಗೊಳಿಸಿದ ಭಾರತ
- ಪಹಲ್ಗಾಮ್ ಭಯೋತ್ಪಾದಕ ದಾಳಿ ಖಂಡಿಸಿದ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್
- ಜಪಾನ್ ರಕ್ಷಣಾ ಸಚಿವರೊಂದಿಗೆ ನವದೆಹಲಿಯಲ್ಲಿಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ದ್ವಿಪಕ್ಷೀಯ ಮಾತುಕತೆ
- ಐಪಿಎಲ್ ಟಿ-೨೦ ಕ್ರಿಕೆಟ್: ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಟಾಸ್ ಗೆದ್ದ ಸನ್‌ರೈಸರ್ಸ್ ಹೈದರಾಬಾದ್ ಫೀಲ್ಡಿಂಗ್ ಆಯ್ಕೆ

<><*<><>*><>

ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಪಾಕಿಸ್ತಾನದ ವಿರುದ್ಧ ಮತ್ತೊಂದು ಧೃಢವಾಧ ಹೆಜ್ಜೆಯಾಗಿ ಭಾರತವು ಚೆನಾಬ್ ನದಿಯ ಬಾಗ್ಲಿಹಾರ್ ಅಣೆಕಟ್ಟೆಯ ಮೂಲಕ ನೀರಿನ ಹರಿವನ್ನು ಸ್ಥಗಿತಗೊಳಿಸಿದೆ. ಸಿಂಧೂ ನದಿಯಿಂದ ಪಾಕಿಸ್ತಾನಕ್ಕೆ ಒಂದೇ ಒಂದು ಹನಿ ನೀರು ಹರಿಯುವುದನ್ನು ತಪ್ಪಿಸಲು ನಿರ್ಧರಿಸಿ, ಬಾಗ್ಲಿಹಾರ್ ಅಣೆಕಟ್ಟೆಯಿಂದ ಪಾಕಿಸ್ತಾನಕ್ಕೆ ನೀರಿನ ಹರಿವನ್ನು ಭಾರತ ತಡೆ ಹಿಡಿದಿದೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ. ಝೀಲಂ ನದಿಯ ಕಿಶನ್‌ಗಂಗಾ ಅಣೆಕಟ್ಟೆಯಲ್ಲಿಯೂ ಇದೇ ರೀತಿಯ ಕ್ರಮಗಳನ್ನು ಭಾರತ ಯೋಜಿಸುತ್ತಿದೆ. ಜಮ್ಮು ವಿಭಾಗದ ರಾಂಬನ್ ಜಿಲ್ಲೆಯ ಬಾಗ್ಲಿಹಾರ್ ಮತ್ತು ಉತ್ತರ ಕಾಶ್ಮೀರದ ಕಿಶನ್‌ಗಂಗಾ ಜಲವಿದ್ಯುತ್ ಅಣೆಕಟ್ಟೆಗಳ ನೀರು ಬಿಡುಗಡೆಯ ಸಮಯವನ್ನು ನಿಯಂತ್ರಿಸುವ ಸಾಮರ್ಥ್ಯವನ್ನು ಭಾರತ ಹೊಂದಿದೆ. ಪಹಲ್ಗಾಮ್ ದಾಳಿಯ ನಂತರ ಸಿಂಧೂ ಜಲ ಒಪ್ಪಂದವನ್ನು ಭಾರತ ರದ್ದುಗೊಳಿಸಿದೆ.

<><*<><>*><>

ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಇಂದು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದೂರವಾಣಿ ಮೂಲಕ ಮಾತುಕತೆ ನಡೆಸಿದ್ದು, ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ತೀವ್ರವಾಗಿ ಖಂಡಿಸಿದರು. ಅಮಾಯಕರ ಜೀವಹಾನಿಗೆ ಸಂತಾಪ ಸೂಚಿಸಿದರು. ಅಲ್ಲದೇ ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಭಾರತಕ್ಕೆ ಸಂಪೂರ್ಣ ಬೆಂಬಲ ವ್ಯಕ್ತಪಡಿಸಿದರು. ಘೋರ ದಾಳಿಯ ಅಪರಾಧಿಗಳು ಮತ್ತು ಅವರ ಬೆಂಬಲಿಗರನ್ನು ಕಾನೂನು ಕ್ರಮಕ್ಕೆ ಒಳಪಡಿಸಬೇಕು ಎಂದು ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಒತ್ತಾಯಿಸಿದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಭಾರತ ಮತ್ತು ರಷ್ಯಾ ನಡುವಿನ ವಿಶೇಷ ಕಾರ್ಯತಂತ್ರದ ಪಾಲುದಾರಿಕೆಯನ್ನು ಇನ್ನಷ್ಟು ಗಾಢಗೊಳಿಸುವ ಬದ್ಧತೆಯನ್ನು ಉಭಯ ನಾಯಕರು ಪುನರುಚ್ಚರಿಸಿದರು.ರಷ್ಯಾ ವಿಜಯ ದಿನದ ೮೦ನೇ ವಾರ್ಷಿಕೋತ್ಸವ ಆಚರಣೆ ಹಿನ್ನೆಲೆಯಲ್ಲಿ ರಷ್ಯಾ ಅಧ್ಯಕ್ಷ ಪುಟಿನ್ ಅವರಿಗೆ ಪ್ರಧಾನಿ ಮೋದಿ ಶುಭಾಶಯಗಳನ್ನು ಕೋರಿದರು. ಇದೇ ವೇಳೆ ಈ ವರ್ಷದ ಕೊನೆಯಲ್ಲಿ ಭಾರತದಲ್ಲಿ ನಡೆಯಲಿರುವ ವಾರ್ಷಿಕ ಶೃಂಗಸಭೆಗೆ ಪುಟಿನ್ ಅವರನ್ನು ಪ್ರಧಾನಿ ಮೋದಿ ಆಹ್ವಾನಿಸಿದರು ಎಂದು ತಿಳಿಸಿದ್ದಾರೆ.

<><*<><>*><>

ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ನವದೆಹಲಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾದರು.ಭಾರತೀಯ ವಾಯುಪಡೆ ಮುಖ್ಯಸ್ಥ ಏರ್‌ಚೀಫ್ ಮಾರ್ಷಲ್ ಅಮರ್‌ಪ್ರೀತ್ ಸಿಂಗ್ ನಿನ್ನೆ ಪ್ರಧಾನಿ ಅವರನ್ನು ಭೇಟಿಯಾಗಿದ್ದರು. ಭಾರತೀಯ ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ದಿನೇಶ್ ತ್ರಿಪಾಠಿ ಹಾಗೂ ಭಾರತೀಯ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಅವರೊಂದಿಗೆ ಸಹ ಪ್ರಧಾನಿ ಪ್ರತ್ಯೇಕ ಸಭೆಗಳನ್ನು ನಡೆಸಿದ್ದರು. ಪಹಲ್ಗಾಮ್ ಭಯೋತ್ಪಾದಕ ದಾಳಿ ಹಿನ್ನೆಲೆಯಲ್ಲಿ ಈ ಸರಣಿ ಸಭೆಗಳು ನಡೆಯುತ್ತಿವೆ.

<><*<><>*><>

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದು ನವದೆಹಲಿಯಲ್ಲಿ ಜಪಾನ್ ರಕ್ಷಣಾ ಸಚಿವ ಜನರಲ್ ನಕಟಾನಿ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು. ಉಭಯ ನಾಯಕರು ಎಲ್ಲಾ ರೀತಿಯ ಭಯೋತ್ಪಾದನೆಯನ್ನು ಖಂಡಿಸಿದರು ಹಾಗೂ ಭಾರತ-ಜಪಾನ್ ವಿಶೇಷ ಕಾರ್ಯತಂತ್ರ ಮತ್ತು ಜಾಗತಿಕ ಪಾಲುದಾರಿಕೆಯ ರಕ್ಷಣಾ ಮತ್ತು ಭದ್ರತಾ ಕ್ರಮಗಳನ್ನು ಪರಿಶೀಲಿಸಿದರು.ದ್ವಿಪಕ್ಷೀಯ ಸಂಬಂಧಗಳನ್ನು ಬಲಪಡಿಸುವ ಮತ್ತು ಪ್ರಾದೇಶಿಕ ಶಾಂತಿಗೆ ಕೊಡುಗೆ ನೀಡುವ ಕಡೆಗೆ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದರು. ಭಾರತ ಮತ್ತು ಜಪಾನ್ ನಡುವಿನ ಬಲವಾದ ಕಡಲ ಸಹಕಾರಕ್ಕೆ ಹೊಸ ಆಯಾಮಗಳನ್ನು ಸೇರಿಸಲು ಇಬ್ಬರೂ ನಾಯಕರು ಒಪ್ಪಿಕೊಂಡರು.ಭಾರತದ ವಿರುದ್ಧ ಪಾಕಿಸ್ತಾನದ ಗಡಿಯಾಚೆಗಿನ ಭಯೋತ್ಪಾದನೆಯ ನೀತಿಯನ್ನು ಸಚಿವ ರಾಜನಾಥ್ ಸಿಂಗ್ ಖಂಡಿಸಿದರು. ಇಂತಹ ದಾಳಿಗಳು ಪ್ರಾದೇಶಿಕ ಶಾಂತಿ ಮತ್ತು ಭದ್ರತೆಯನ್ನು ಅಸ್ಥಿರಗೊಳಿಸುತ್ತವೆ ಎಂದು ಅವರು ಹೇಳಿದರು. ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಗೆ ಜಪಾನಿನ ರಕ್ಷಣಾ ಸಚಿವರು ಸಂತಾಪ ಸೂಚಿಸಿದರು ಮತ್ತು ಭಯೋತ್ಪಾದನೆ ವಿರುದ್ಧ ಭಾರತಕ್ಕೆ ಸಂಪೂರ್ಣ ಬೆಂಬಲವನ್ನು ಘೋಷಿಸಿದರು.

<><*<><>*><>

ಪರಿಸರ ನಾಶ ಮಾಡಿ ಅಭಿವೃದ್ಧಿ ಚಟುವಟಿಕೆ ನಡೆಸುವ ಬದಲು ಪ್ರಾಕೃತಿಕ ಸೌಹಾರ್ದತೆ ಇಂದಿನ ತುರ್ತು ಅಗತ್ಯ ಎಂದು ಉಪ ರಾಷ್ಟ್ರಪತಿ ಜಗದೀಪ್ ಧನಕರ್ ಪ್ರತಿಪಾದಿಸಿದ್ದಾರೆ.ಶಿರಸಿಯ ಅರಣ್ಯ ಕಾಲೇಜಿನಲ್ಲಿಂದು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಮಾತನಾಡಿದ ಅವರು, ಅರಣ್ಯ ಶ್ವಾಸಕೋಶದಂತೆ, ಶ್ವಾಸಕೋಶ ಸರಿಯಾಗಿದ್ದರೆ ಮನುಷ್ಯ ಉಸಿರಾಡಬಹುದು ಎಂದು ಹೇಳಿದ್ದಾರೆ. ಪಶ್ಚಿಮ ಘಟ್ಟದ ರಕ್ಷಣೆಯಲ್ಲಿ ಅರಣ್ಯ ವಿದ್ಯಾರ್ಥಿಗಳೇ ಅರಣ್ಯದ ಉಳಿವಿನ ರಾಯಭಾರಿಗಳು ಎಂದು ಅವರು ಶ್ಲಾಘಿಸಿದ್ದಾರೆ.

<><*<><>*><>

ನವದೆಹಲಿಯಲ್ಲಿಂದು ಜಪಾನ್ ಸಂಸತ್ತಿನ ಸ್ಪೀಕರ್ ಫುಕುಶಿರೋ ನುಕಾಗಾ ಅವರ ನೇತೃತ್ವದ ನಿಯೋಗದೊಂದಿಗೆ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಮಾತುಕತೆ ನಡೆಸಿದರು. ಇದೇ ವೇಳೆ ಪಹಲ್ಗಾಮ್ ಭಯೊತ್ಪಾದಕ ದಾಳಿಯ ಹಿನ್ನೆಲೆಯಲ್ಲಿ ಭಾರತಕ್ಕೆ ಬೆಂಬಲ ಸೂಚಿಸಿದ್ದಕ್ಕಾಗಿ ಫುಕುಶಿರೋ ಅವರಿಗೆ ಡಾ.ಎಸ್.ಜೈಶಂಕರ್ ಧನ್ಯವಾದ ತಿಳಿಸಿದರು.

ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ಅವರು, ಭಾರತ ಮತ್ತು ಜಪಾನ್ ನಡುವೆ ಪ್ರತಿಭಾ ವಿನಿಮಯವನ್ನು ಹೆಚ್ಚಿಸುವುದು, ವ್ಯಾಪಾರ ಸಂಪರ್ಕಗಳನ್ನು ಹೆಚ್ಚಿಸುವುದು ಮತ್ತು ತಂತ್ರಜ್ಞಾನ ಪಾಲುದಾರಿಕೆ ಬಲೀಷ್ಠಗೊಳಿಸುವ ನಿಟ್ಟಿನಲ್ಲಿ ಕಾರ್ಯಸೂಚಿಯನ್ನು ಅಭಿವೃದ್ಧಿಪಡಿಸಲು ಉಭಯ ಕಡೆಯವರು ಪರಸ್ಪರ ಒಪ್ಪಿಕೊಂಡರು ಎಂದು ಮಾಹಿತಿ ನೀಡಿದ್ದಾರೆ.

<><*<><>*><>

ಇಟಲಿಯ ಮಿಲನ್‌ನಲ್ಲಿ ಇಂದು ನಡೆದ ೫೮ನೇ ಏಷ್ಯನ್ ಅಭಿವೃದ್ಧಿ ಬ್ಯಾಂಕ್‌ನ ವಾರ್ಷಿಕ ಸಭೆಯಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು, ಎಡಿಬಿ ಅಧ್ಯಕ್ಷ ಮಸಾಟೋ ಕಾಂಡಾ ಅವರನ್ನು ಭೇಟಿಯಾದರು.ಭಾರತವು ಖಾಸಗಿ ವಲಯದ ನೇತೃತ್ವದ ಆರ್ಥಿಕ ಬೆಳವಣಿಗೆಯ ಮೇಲೆ ಕೇಂದ್ರೀಕರಿಸುತ್ತದೆ ಮತ್ತು ವ್ಯವಹಾರವನ್ನು ಸುಲಭಗೊಳಿಸಲು ದಿಟ್ಟ ಉಪಕ್ರಮಗಳ ಮೂಲಕ ನಿರಂತರವಾಗಿ ಅನುಕೂಲಕರ ನೀತಿ ಮತ್ತು ನಿಯಂತ್ರಕ ಪರಿಸರ ವ್ಯವಸ್ಥೆಯನ್ನು ರಚಿಸುತ್ತಿದೆ ಎಂದು ಸಭೆಯಲ್ಲಿ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಪುನರುಚ್ಚರಿಸಿದರು. ಈ ಉಪಕ್ರಮಗಳಲ್ಲಿ ದಿವಾಳಿತನ, ಕಾರ್ಪೊರೇಟ್ ತೆರಿಗೆ ದರ ಕಡಿತ, ಜಿಎಸ್‌ಟಿ ಅನುಷ್ಠಾನ, ಉತ್ಪಾದನೆ-ಸಂಬಂಧಿತ ಪ್ರೋತ್ಸಾಹಕಗಳು, ಗತಿಶಕ್ತಿ ರಾಷ್ಟ್ರೀಯ ಮಾಸ್ಟರ್ ಪ್ಲಾನ್ ಮತ್ತು ಸ್ಟಾರ್ಟ್‌ಅಪ್ ಇಂಡಿಯಾ ಸೇರಿವೆ ಎಂದರು. ಪ್ರಧಾನಿ ನರೇಂದ್ರ ಮೋದಿಯವರ ವಿಕಸಿತ ಭಾರತ್ ೨೦೪೭ ರ ದೃಷ್ಟಿಕೋನದಿಂದ ಮಾರ್ಗದರ್ಶನ ಪಡೆದ ಭಾರತದ ಅಭಿವೃದ್ಧಿ ಆದ್ಯತೆಗಳಿಗೆ ಎಡಿಬಿಯ ಸಂಪೂರ್ಣ ಬೆಂಬಲವಿದೆ ಎಂದು ಎಡಿಬಿ ಅಧ್ಯಕ್ಷರು ತಿಳಿಸಿದ್ದಾರೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ಮಾಹಿತಿ ನೀಡಿದ್ದಾರೆ.

<><*<><>*><>

ಭಾರತದ ಸಭೆಗಳು, ಪ್ರೋತ್ಸಾಹಕಗಳು, ಸಮ್ಮೇಳನಗಳು ಮತ್ತು ಪ್ರದರ್ಶನಗಳು - ಒIಅಇ ಉದ್ಯಮವು ಪ್ರಮುಖ ಆರ್ಥಿಕ ಉತ್ಪಾದಕ ಉದ್ಯಮವಾಗಿದ್ದು, ಇದು ಉತ್ತಮ ಗುಣಮಟ್ಟದ ಉದ್ಯೋಗಗಳನ್ನು ಸೃಷ್ಟಿಸುತ್ತದೆ ಎಂದು ಕೇಂದ್ರ ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಹೇಳಿದ್ದಾರೆ.ರಾಜಸ್ಥಾನದ ಜೈಪುರದಲ್ಲಿಂದು ನಡೆದ 'ಮೀಟ್ ಇನ್ ಇಂಡಿಯಾ' ಸಮಾವೇಶ ಉದ್ದೇಶಿಸಿ ಮಾತನಾಡಿದ ಸಚಿವರು, ಭಾರತದ ಒIಅಇ ಉದ್ಯಮವು ಜಾಗತಿಕ ಶಕ್ತಿ ಕೇಂದ್ರವಾಗಿ ಹೊರಹೊಮ್ಮುತ್ತಿದೆ. ಇದು ಬಲವಾದ ಆರ್ಥಿಕ ಬೆಳವಣಿಗೆ, ವಿಶ್ವ ದರ್ಜೆಯ

ಮೂಲಸೌಕರ್ಯ ಮತ್ತು ಸರ್ಕಾರಿ ಬೆಂಬಲದಿಂದ ಉತ್ತೇಜಿಸಲ್ಪಟ್ಟಿದೆ ಎಂದು ಪ್ರತಿಪಾದಿಸಿದರು.ಭಾರತ್ ಮಂಟಪಂ, ಯಶೋಭೂಮಿ, ಜಿಯೋ ವರ್ಲ್ಡ್ ಸೆಂಟರ್ ಸೇರಿದಂತೆ ಪ್ರಮುಖ ಸ್ಥಳಗಳೊಂದಿಗೆ, ಒ।ಅಇ ಮೇಲೆ ವಿಶೇಷ ಗಮನ ಹರಿಸುವುದರೊಂದಿಗೆ, ಕೇಂದ್ರ ಸರ್ಕಾರವು ಭಾರತದ ಕನಿಷ್ಠ ೧೦ ನಗರಗಳನ್ನು ವಿಶ್ವದ ಉನ್ನತ ಒ।ಅಇ ತಾಣಗಳಾಗಿ ಉನ್ನತೀಕರಿಸುವ ಗುರಿಯನ್ನು ಹೊಂದಿದೆ ಎಂದು ತಿಳಿಸಿದರು. ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಭಾರತವು ವಿಶ್ವದ ಅತ್ಯಂತ ಮೆಚ್ಚುಗೆ ಪಡೆದ ಪ್ರವಾಸೋದ್ಯಮ ತಾಣವಾಗಲು ಸಜ್ಜಾಗಿದೆ ಎಂದು ಕೇಂದ್ರ ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಪ್ರತಿಪಾದಿಸಿದರು.

<><*<><>*><>

ನೂತನ ಅಪರಾಧ ಕಾನೂನುಗಳ ಅನುಷ್ಠಾನವನ್ನು ಪರಿಶೀಲಿಸಲು ಕೇಂದ್ರ ಗೃಹ ಸಚಿವ ಅಮಿತ್ ಶಾ ಅಧ್ಯಕ್ಷತೆಯಲ್ಲಿ ನವದೆಹಲಿಯಲ್ಲಿ ಇಂದು ಸಭೆ ನಡೆಯಿತು. ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿನಯ್ ಸಕ್ಸೇನಾ, ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತ ಮತ್ತು ದೆಹಲಿ ಗೃಹ ಸಚಿವ ಆಶಿಶ್ ಸೂದ್ ಕೂಡ ಸಭೆಯಲ್ಲಿ ಭಾಗವಹಿಸಿದ್ದಾರೆ. ಮೂರು ಹೊಸ ಅಪರಾಧ ಕಾನೂನುಗಳಾದ- ಭಾರತೀಯ ನ್ಯಾಯ ಸಂಹಿತೆ ೨೦೨೩, ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ೨೦೨೩ ಮತ್ತು ಭಾರತೀಯ ಸಾಕ್ಷ್ಯ ಅಧಿನಿಯಮ ೨೦೨೩, ಕಳೆದ ವರ್ಷ ಜುಲೈನಲ್ಲಿ ಜಾರಿಗೆ ಬಂದಿತು.

<><*<><>*><>

ತೆಲಂಗಾಣದ ಹೈದರಾಬಾದ್‌ನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್- ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಿವೆ.ಟಾಸ್ ಗೆದ್ದ ಸನ್‌ರೈಸರ್ಸ್ ಹೈದರಾಬಾದ್, ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

<><*<><>*><>

ಖೇಲೋ ಇಂಡಿಯಾ ಯೂತ್ ಗೇಮ್ಸ್‌ನ ಎರಡನೇ ದಿನವಾದ ಇಂದು, ಕಬಡ್ಡಿ, ಬಿಲ್ಲುಗಾರಿಕೆ ಸೇರಿದಂತೆ ಹಲವಾರು ಸ್ಪರ್ಧೆಗಳು ನಡೆಯಿತು. ಬಾಲಕಿಯರ ವಿಭಾಗದ ಫುಟ್‌ಬಾಲ್ ಸ್ಪರ್ಧೆಯಲ್ಲಿ, ಬಿಹಾರವನ್ನು ೨-೧ ಅಂತರದಿಂದ ತಮಿಳುನಾಡು ಸೋಲಿಸಿತು. ಈ ಪಂದ್ಯವನ್ನು ಬೇಗುಸರಾಯ್‌ನ ರಿಫೈನರಿ ಮೈದಾನದಲ್ಲಿ ನಡೆಸಲಾಯಿತು.ಗಟ್ಕಾದ ತಂಡ ಸ್ಪರ್ಧೆಗಳಲ್ಲಿ, ಬಾಲಕಿಯರ ವಿಭಾಗದಲ್ಲಿ ಗೋವಾ ವಿರುದ್ಧ ಬಿಹಾರ ಜಯ ಗಳಿಸಿತು. ಅದೇ ರೀತಿ ತೆಲಂಗಾಣವನ್ನು ಅಸ್ಸಾಂ ಸೋಲಿಸಿತು.

<><*<><>*><>

ಕೆನಡಾ ಮೂಲದ ಖಲಿಸ್ತಾನಿ ಭಯೋತ್ಪಾದಕ ಅರ್ಶ್ ಡಲ್ಲಾ ಜೊತೆ ಸಂಬಂಧ ಹೊಂದಿರುವ ೨೦೨೪ ರ ನೀಮ್ರಾನಾ ಹೋಟೆಲ್ ಗುಂಡಿನ ದಾಳಿಯ ತನಿಖೆ ಹಿನ್ನೆಲೆಯಲ್ಲಿ ರಾಷ್ಟ್ರೀಯ ತನಿಖಾ ಸಂಸ್ಥೆ- ಎನ್‌ಐಎ ಇಂದು ರಾಜಸ್ಥಾನ, ಹರಿಯಾಣ ಮತ್ತು ದೆಹಲಿಯ ೧೦ ಸ್ಥಳಗಳಲ್ಲಿ ಶೋಧ ನಡೆಸಿತು. ನಿಷೇಧಿತ ಖಲಿಸ್ತಾನಿ ಸಂಘಟನೆಗಳಿಗೆ ಹಣವನ್ನು ಸಂಗ್ರಹಿಸಲು ಅರ್ಶ್ ಡಲ್ಲಾ ಸಹಚರರು ಭಯೋತ್ಪಾದನೆ ಮತ್ತು ಹಿಂಸಾಚಾರವನ್ನು ಅಸ್ತ್ರವಾಗಿ ಬಳಸುತ್ತಾರೆ ಎಂದು ಎನ್‌ಐಎ ಅಧಿಕಾರಿಗಳು ತಿಳಿಸಿದ್ದಾರೆ.

<><*<><>*><>

ಮುಂಬೈ ಷೇರು ಮಾರುಕಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ - ಸೆನ್ಸೆಕ್ಸ್ ೨೯೫ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೮೦ ಸಾವಿರದ ೭೯೭ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ - ನಿಫ್ಟಿ ೧೧೪ ಅಂಕಗಳು ಏರಿಕೆ ಕಂಡಿದ್ದು ದಿನದ ಅಂತ್ಯಕ್ಕೆ ೨೪ ಸಾವಿರದ ೪೬೧ ಅಂಕಗಳು ದಾಖಲಾಗಿದೆ. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೇರಿಕನ್ ಡಾಲರ್ ಭಾರತೀಯ ರೂಪಾಯಿ ಮೌಲ್ಯ ೮೪ ರೂಪಾಯಿ ೨೬ ಪೈಸೆ ಅಷ್ಟಾಗಿದೆ.

<><*<><>*><>

ಭಾರತ ಮತ್ತು ಬೆಲ್ಜಿಯಂ ನಡುವಿನ ದ್ವಿಪಕ್ಷೀಯ ವ್ಯಾಪಾರ ಹೆಚ್ಚಿಸುವ, ಕೈಗಾರಿಕಾ ಸಹಯೋಗ ಬೆಳೆಸುವ ಹಾಗೂ ಶುದ್ಧ ಇಂಧನ, ಅರೆ ವಾಹಕಗಳು, ರಕ್ಷಣಾ ಉತ್ಪಾದನೆ ಮತ್ತು ಔಷಧದಂತಹ ಕಾರ್ಯತಂತ್ರದ ವಲಯಗಳಲ್ಲಿ ಹೂಡಿಕೆಯನ್ನು ಉತ್ತೇಜಿಸುವ ಮಾರ್ಗಗಳನ್ನು ಕುರಿತು ಉಭಯ ರಾಷ್ಟ್ರಗಳ ನಡುವೆ ಚರ್ಚಿಸಲಾಗಿದೆ.ಐರೋಪ್ಯ ಒಕ್ಕೂಟ ಮತ್ತು ಭಾರತದ ನಡುವಿನ ಮುಕ್ತ ವ್ಯಾಪಾರ ಒಪ್ಪಂದದ ಮಾತುಕತೆಗಳಲ್ಲಿನ ಪ್ರಗತಿಯನ್ನು ಪರಿಶೀಲಿಸಲಾಗಿದೆ.ಬೆಲ್ಜಿಯಂ ಪ್ರವಾಸದ ವೇಳೆ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್, ಬೆಲ್ಜಿಯಂ ರಕ್ಷಣಾ ಮತ್ತು ವಿದೇಶಿ ವ್ಯಾಪಾರ ಸಚಿವ ಥಿಯೊ ಫ್ರಾಂಕೆನ್ ಹಾಗೂ ಫ್ಲಾಂಡರ್ಸ್ ಪ್ರದೇಶದ ಸಚಿವ ಅಧ್ಯಕ್ಷ ಮಥಿಯಾಸ್ ಡೈಪೆಂಡೆಲ್ ಅವರೊಂದಿಗಿನ ಸಭೆಗಳಲ್ಲಿ ಈ ಎಲ್ಲ ಕ್ಷೇತ್ರಗಳ ಕುರಿತಂತೆ ಚರ್ಚೆ ನಡೆದಿದೆ.೨೦೨೩-೨೪ರಲ್ಲಿ ದ್ವಿಪಕ್ಷೀಯ ವ್ಯಾಪಾರ ಮೌಲ್ಯ ೧೫.೦೭ ಶತಕೋಟಿ ಡಾಲರ್ ತಲುಪುವ ಮೂಲಕ ಬೆಲ್ಜಿಯಂ ಐರೋಪ್ಯ ಒಕ್ಕೂಟದಲ್ಲಿ ಭಾರತದ ೫ನೇ ಅತಿದೊಡ್ಡ ವ್ಯಾಪಾರ ಪಾಲುದಾರ ರಾಷ್ಟ್ರವಾಗಿದೆ.

<><*<><>*><>

ಅಮೆರಿಕ ಹೊರಗೆ ನಿರ್ಮಾಣವಾಗುವ ಎಲ್ಲ ಚಲನಚಿತ್ರಗಳ ಮೇಲೆ ೧೦೦ ಪ್ರತಿಶತ ಸುಂಕ ವಿಧಿಸುವುದಾಗಿ ಅಮೆರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಘೋಷಿಸಿದ್ದಾರೆ. ಈ ಕಾರ್ಯ ವಿಧಾನವನ್ನು ಆರಂಭಿಸಲು ವಾಣಿಜ್ಯ ಇಲಾಖೆ ಮತ್ತು ಅಮೆರಿಕ ವ್ಯಾಪಾರ ಪ್ರತಿನಿಧಿಗೆ ಅವರು ಸೂಚನೆ ನೀಡಿದ್ದಾರೆ.

<><*<><>*><>

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>